**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪ್ರತಾಪ ಸಿಂಹ ನಾಯಕ್ ಕೆ., ಇವರು ನಿಯಮ 330 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:**

ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ 2004-05 ರಿಂದ 2008-09 ರ ತನಕ ಯುಜಿಡಿ ಕಾಮಗಾರಿ ಮತ್ತು ಇತರ ಕಾಮಗಾರಿಗಳಿಗೆ ಅವಶ್ಯವಿದ್ದ ಸ್ಥಳಕ್ಕಿಂತ ಹೆಚ್ಚುವರಿ ಸ್ಥಳವನ್ನು ಅನಗತ್ಯವಾಗಿ ಹಾಗೂ ಮನ ಬಂದಂತೆ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ. ಯುಜಿಡಿ ಕಾಮಗಾರಿ ಮತ್ತು ಇತರ ಕಾಮಗಾರಿಗಳಿಗೆ ಬೇಕಾದಷ್ಟು ಸ್ಥಳವನ್ನು ಉಪಯೋಗಿಸಿಕೊಂಡು ಉಳಿಕೆ ಹೆಚ್ಚುವರಿ ಸ್ಥಳವನ್ನು ಮರಳಿ ಭೂಮಾಲೀಕರಿಗೆ ಹಿಂತಿರುಗಿಸದೇ ಇರುವುದರಿಂದ ಸ್ಥಳದ ಮಾಲೀಕರಿಗೆ ತೀವ್ರ ತೊಂದರೆಯಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:**

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಯುಜಿಡಿ ಕಾಮಗಾರಿಗಾಗಿ ಭೂಸ್ವಾಧೀನ ಪಡಿಸಿಕೊಳ್ಳಲು ಕೋರಲಾದಂತೆ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಭೂಸ್ವಾಧೀನ ಕಾಯ್ದೆ 1894 ರ ಕಲಂ 4(1)ರಂತೆ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಿ, ಜಂಟಿ ಅಳತೆ ಪ್ರಮಾಣಪತ್ರ ಹಾಗೂ ನಕ್ಷೆಯನ್ನು ತಯಾರಿಸಿ ಸದರಿ ಕಾಯ್ದೆಯ ಕಲಂ 6(1)ಎ ರಂತೆ ಜಮೀನನ್ನು ಭೂಸ್ವಾಧೀನ ಪಡಿಸುವ ಬಗ್ಗೆ ನಿರ್ದೇಶನ ಕೋರಿರುವಂತೆ ಸರ್ಕಾರದಿಂದ (ಕಂದಾಯ ಇಲಾಖೆಯಿಂದ) ಕಲಂ 6(1) ರನ್ವಯ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ಭೂಮಾಲೀಕರಿಗೆ ನೋಟೀಸು ಜಾರಿ ಮಾಡಿ, ಅವಾರ್ಡು ತನಿಖೆ ನಡೆಸಿ, ಐತೀರ್ಪು ರಚಿಸಿ, ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ಭೂಸ್ವಾಧೀನ ಕಾಯ್ದೆ 1894 ರ ಕಲಂ 16(2) ರಂತೆ ಜಮೀನನ್ನು ಸ್ವಾಧೀನಕ್ಕೆ ಪಡೆದುಕೊಂಡು, ಯುಜಿಡಿ ಕಾಮಗಾರಿ ನಡೆಸುವ ಸಲುವಾಗಿ ಮಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದ್ದು, ಪ್ರಸ್ತುತ ಸದರಿ ಜಮೀನುಗಳು ಪಾಲಿಕೆಯ ಸ್ವಾಧೀನದಲ್ಲಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಕಂಇ 89 ಭೂಸ್ವಾಹಾ 2012, ಬೆಂಗಳೂರು ದಿನಾಂಕ 20-12-2012ರಂತೆ ಜಮೀನನ್ನು ಸ್ವಾಧೀನಪಡಿಸಿಕೊಂಡು ಭೂಸ್ವಾಧೀನ ಕಾಯ್ದೆ 1894 ರ ಕಲಂ 16(2) ರಡಿ ಅಧಿಸೂಚನೆ ಹೊರಡಿಸಿದ ನಂತರ ಯಾವುದೇ ಭೂಸ್ವಾಧೀನ ಪಡಿಸಿಕೊಂಡ ಜಮೀನನ್ನು ಭೂಸ್ವಾಧೀನದಿಂದ ಕೈಬಿಡಲು ಅವಕಾಶವಿರುವುದಿಲ್ಲ.

**ನಅಇ 14 ಎಂಎಂಸಿ 2024 (ಇ)**

21/02/2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು